ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 17 ನೇ ಮಾರ್ಚ್, 2020

ಡಾಟಾ ಎಂಟ್ರಿ ಆಪರೇಟರ್‌ಗಳ ಕುರಿತು

ಶ್ರೀ ರಘುನಾಥ್ ರಾವ್ ಮಲ್ಕಾಪೂರೆ(ವಿಧಾನಸಭೆಯಿಂದ ಚುನಾಯಿತರಾದವರು):-

1069 (1265) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಆಹಾರ ಇಲಾಖೆಯಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಡಾಟಾ ಎಂಟ್ರಿ ಆಪರೇಟರ್ಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಸದರಿ ಇಲಾಖೆಯಲ್ಲಿ ಸಿಬ್ಬಂದಿಗಳು ಯಾವ ವರ್ಷಗಳಿಂದ ಕೆಲಸ ಮಾಡುತ್ತಿದ್ದಾರೆ; ಯಾವ ವರ್ಷದವರೆಗೆ ಅವರ ಆದೇಶ ನವೀಕರಣವಾಗಿರುತ್ತದೆ; ನವೀಕರಣ ಆಗದಿರಲು ಕಾರಣಗಳೇನು; (ಸ್ಪಷ್ಟ ಮಾಹಿತಿ ನೀಡುವುದು)

(ಇ) ಈ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸದರಿ ಸಿಬ್ಬಂದಿಗಳ ವೇತನವನ್ನು ಪ್ರತಿ ತಿಂಗಳು ಸಮಯಕ್ಕೆ ಸರಿಯಾಗಿ ನೀಡಲಾಗುತ್ತಿದೆಯೇ; ನೀಡಲಾಗದಿದ್ದಲ್ಲಿ, ಎಷ್ಟು ತಿಂಗಳುಗಳಿಂದ ಬಾಕಿ ಇರುತ್ತದೆ? (ಸಂಪೂರ್ಣ ಮಾಹಿತಿ ಒದಗಿಸುವುದು)